ಅಧ್ಯಕ್ಷರು.—ಖಂಡ ಎರಡು ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ಎರಡು ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೬ನೇ ಇಸವಿಯ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾಪ ಏನೆಂದರೆ, ೧೯೮೬ನೇ ಇಸವಿಯ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು...

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಮಂಸೂದೆಗೆ ಒಪ್ಪಿಗೆ ನೀಡಲಾಯಿತು.

ಶ್ರೀ ಬಿ. ಬಸವಲಿಂಗಪ್ಪ.—ಮಾನ್ಯ ಅಧ್ಯಕ್ಷರೇ, ಖಂಡ ಎಂದು ಹೇಳುತ್ತೀರಿ. ಅದರ ಅರ್ಥವೇನು ?

ಶ್ರೀ ಎ. ಲಕ್ಷ್ಮೀಸಾಗರ್.—ಖಂಡ ಎಂದರೆ ಭಾಗ ಎಂದು ಅರ್ಥ.

ಶ್ರೀ ಬಸವಲಿಂಗಪ್ಪ,—ಖಂಡವಿದಿಕೋ ಮಾಂಸವಿದಿಕೋ ಎಂದು ಹೇಳುವಂತೆ ಇಲ್ಲಿಯೂ ಖಂಡ ಎಂದು ಹೇಳುವುದಕ್ಕೆ ಬದಲು ಕಂಡ ಎಂದು ಹೇಳುವುದು ಒಳ್ಳೆಯದು.

ಅಧ್ಯಕ್ಷರು. —ಇದನ್ನೆಲ್ಲಾ ತಾವು ಮುಂದಿನ ಮಂಸೂದೆಯ ಮೇಲೆ ಮಾತನಾಡುವಾಗ ಹೇಳಿ.

೧೯೮೬ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ

ಶ್ರೀ ಎ. ಲಕ್ಷ್ಮೀಸಾಗರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೬ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

(ಪ್ರಸ್ತಾವವನ್ನು ಮಂಡಿಸಲಾಯಿತು)

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೇ, ಬಡ್ಜೆಟ್‌ನಲ್ಲಿ ಈಗಾಗಲೇ ಪ್ರಸ್ತಾಪ ಮಾಡಿರುವುದನ್ನು ಇದರಲ್ಲಿ ಸೇರಿಸಲಾಗಿದೆ. ಆದ್ದರಿಂದ ಇದಕ್ಕೆ ಮಾನ್ಯ ಸಭೆ ಒಪ್ಪಿಗೆ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು.—ಈಗ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ, ೧೯೮೬ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨ ರಿಂದ ೨೦ ಎರಡೂ ಸೇರಿದಂತೆ

ಅಧ್ಯಕ್ಷರು.—ಖಂಡ ೨ ರಿಂದ ೨೦ ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿ ರುತ್ತದೆ...

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ ರಿಂದ ೨೦ ರ ವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ.—

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ' ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ. "

ಪ್ರಸ್ತಾವನೆಯನ್ನು ಅಂಗೀಕರಿಸಲಾಯಿತು

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ,, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ, ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) —ಮಾನ್ಯ ಅಧ್ಯಕ್ಷರೇ, ೧೯೮೬ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ೧೯೮೬ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು)

೧೯೮೬ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು, ಕಸಬುಗಳು ಮತ್ತು ಉದ್ಯೋಗಗಳ (ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೬ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು, ಕಸಬುಗಳು ಮತ್ತು ಉದ್ಯೋಗಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನೆಯನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೇ, ಈ ವೃತ್ತಿ ತೆರಿಗೆಗೆ ಸಂಬಂಧ ಪಟ್ಟಂತೆ ವ್ಯಾಪಾರಸ್ಥರು ಸೆಪ್ಟೆಂಬರ್ ೩೦ ರೊಳಗಾಗಿ ರಿಟರ್ನ್ಸ್ ಫೈಲ್ ಮಾಡಬೇಕಾಗಿತ್ತು. ಇದರಿಂದ ಅನೇಕರಿಗೆ ತೊಂದರೆ ಆಗಿತ್ತು. ಈ ಕಾರಣದಿಂದ ಏಪ್ರಿಲ್ ೩೦ ರೊಳಗೆ ರಿಟರ್ನ್ಸ್ ಫೈಲ್ ಮಾಡಲಂ ವ್ಯವಸ್ಥೆ ಮಾಡಲಾಗಿದೆ. ವ್ಯಾಪಾರಸ್ಥರು ಇನ್–ಕಮ್ ಟ್ಯಾಕ್ಸ್, ಟರ್ನ್–ಓವರ್ ಟ್ಯಾಕ್ಸ್ ಕೊಡುವ ಸಂದರ್ಭದಲ್ಲಿಯೇ ಇದನ್ನು ಸಹ ಕೊಡುವಂತಹ ಒಂದು ವ್ಯವಸ್ಥೆಯನ್ನು ಇದರಲ್ಲಿ ಮಾಡಲಾಗಿದೆ. ಇದರಿಂದ ಬಹಳ ಜನರಿಗೆ ತೊಂದರೆ ಕಡಿಮೆ ಆಗುತ್ತದೆ. ಆದ್ದರಿಂದ ಇದಕ್ಕೆ ಮಾನ್ಯ ಸಭೆ ಒಪ್ಪಿಗೆ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ

ಶ್ರೀ ಎಂ ವೀರಪ್ಪ ಮೊಯ್ಲಿ.—ಮಾನ್ಯ ಅಧ್ಯಕ್ಷರೇ, ಇಲ್ಲಿ ಜನರಿಗೆ ಅನುಕೂಲ ಆಗಲಿ ಎಂದು ಈ ತಿದ್ದುಪಡಿ ಮಾಡಿದ್ದೇವೆಂದು ಮಾನ್ಯ ಮಂತ್ರಿಗಳು ಹೇಳಿದ್ದಾರೆ. ಇದು ಸರಿಯಲ್ಲ. ಇದರಿಂದ ಸರ್ಕಾರದವರಿಗೆ ಅನುಕೂಲವಾಗುತ್ತದೆಂದು ಬೇಕಾದರೆ ಹೇಳಲಿ ಆದರೆ ಜನರಿಗೆ ಅನುಕೂಲವಾಗುತ್ತದೆಂದು ಕಾರಣ ಕೊಡುವುದು ಸರಿಯಲ್ಲ. ಈಗ ತಮಗೆಲ್ಲಾ ತಿಳಿದಿರುವಂತೆ ಸಣ್ಣ ಸಣ್ಣ ಅಂಗಡಿಗಳವರು ಕೆ, ಎಸ್, ಟಿ, ಗೆ ಸಂಬಂಧಪಟ್ಟಂತೆ ವರ್ಷಕ್ಕೆ ೨೫೦ ರೂಪಾಯಿಗಳ ಫೀ ಕೊಡಬೇಕಾಗಿದೆ.